ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 20–02–2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಪತ್ರಿಕಾಗೋಷ್ಠಿ:<br>ಶ್ರೀ ಆರ್. ವಿ. ದೇಶಪಾಂಡೆ,<br>ಬೃಹತ್ ಮತ್ತು ಮದ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು, | 22–02–2016<br>ಸೋಮವಾರ<br>ಬೆಳಿಗ್ಗೆ<br>11–30 ಗಂಟೆಗೆ | ಸಮ್ಮೇಳನ ಸಭಾಂಗಣ,<br>ಮೂರನೇ ಮಹಡಿ,<br>ವಿಧಾನಸೌಧ,<br>ಬೆಂಗಳೂರು |
| 2 | ಉದ್ಘಾಟನೆ:<br>'ಪತ್ರಿಕೋದ್ಯಮ ವೃತ್ತಿ ಕೌಶಲ್ಯ ತರಬೇತಿ'<br>ಡಾ: ಎನ್ ಎಸ್ ಚನ್ನಪ್ಪಗೌಡ<br>ಸರ್ಕಾರದ ಕಾರ್ಯದರ್ಶಿಗಳು<br>ಕನ್ನಡ, ಸಂಸ್ಕೃತಿ & ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ<br>ಮುಖ್ಯ ಅತಿಥಿಗಳು:<br>ಶ್ರೀ ದಿನೇಶ್ ಅಮೀನ್ ಮಟ್ಟು<br>ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರು | 22–02–2016<br>ಸೋಮವಾರ<br>ಬೆಳಿಗ್ಗೆ<br>11–30 ಗಂಟೆಗೆ | ಸುಲೋಚನಾ ಸಭಾಂಗಣ<br>ಮೊದಲನೇ ಮಹಡಿ,<br>ವಾರ್ತಾ ಸೌಧ, # 17,<br>ಭಗವಾನ್ ಮಹಾವೀರ್ ರಸ್ತೆ,<br>ಬೆಂಗಳೂರು. |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ದಾಖಲಾತಿ ಪರಿಶೀಲನೆ

ಬೆಂಗಳೂರು, ಫೆಬ್ರವರಿ 20 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ 21-02-2016 ರಲ್ಲಿ ಅಧಿಸೂಚಿಸಲಾದ ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜುಗಳಲ್ಲಿನ 05 ಪ್ರಾಂಶುಪಾಲರು ಹುದ್ದೆಗಳು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಲ್ಲಿ ನಗರ ಯೋಜಕರ 22 ಹುದ್ದೆಗಳು; ತೋಟಗಾರಿಕೆ ಇಲಾಖೆಯಲ್ಲಿ ಸಹಾಯಕ ತೋಟಗಾರಿಕೆ ನಿರ್ದೇಶಕರ 07 ಹುದ್ದೆಗಳು ಹಾಗೂ ಕಾರ್ಖಾನೆಗಳ ಮತ್ತು ಬಾಯ್ಲರುಗಳ, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ನಿರ್ದೇಶನಾಲಯದಲ್ಲಿನ ಕಾರ್ಖಾನೆಗಳ ಸಹಯಕ ನಿರ್ದೇಶಕರ ಹುದ್ದೆಗಳಿಗೆ ದಿನಾಂಕ: 22—02-2016 ರಂದು ಬೆಳಿಗ್ಗೆ 9-30 ಗಂಟೆಗೆ ಮತ್ತು ಮದ್ಯಾಹ್ನ 2-00 ಗಂಟೆಗೆ ಹಾಗೂ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳಲ್ಲಿನ ಕನ್ನಡ ಮತ್ತು ಇಂಗ್ಲೀಷ್ ಭಾಷಾ ಉಪನ್ಯಾಸಕರು, ಗಣಿತಶಾಸ್ತ್ರ ಹಾಗೂ ಕಂಪ್ಯೂಟರ್ ಸೈನ್ಸ್ ಉಪನ್ಯಾಸಕರ ತಲಾ 05 ಹುದ್ದೆಗಳಿಗೆ ದಿನಾಂಕ 23-02-2016 ರಂದು ಬೆಳಿಗ್ಗೆ 9-30 ಗಂಟೆಗೆಮೂಲ ದಾಖಲಾತಿಗಳ ಪರಿಶೀಲನೆಯನ್ನು ಆಯೋಗದ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿ ನಡೆಸಲಿದೆ.

ಅರ್ಹ ವಿದ್ಯಾರ್ಥಿಗಳಿಗೆ ಸೂಚನಾ ಪತ್ರಗಳನ್ನು ಈಗಾಗಲೇ ಕಳುಹಿಸಲಾಗಿದೆ. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿ ಪರಿಶೀಲನೆಯ ವೇಳೆ ಮತ್ತು ದಿನಾಂಕ, ಇತ್ಯಾದಿ ವಿವರಗಳನ್ನು ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ " **http://kpsc.kar.nic.in/Home Page** " ರಲ್ಲಿ ಪ್ರಕಟಿಸಿದೆ.

ಬಾಬು:ಜಿಪಿಆರ್

## ಫಲಿತಾಂಶ ಪ್ರಕಟ

ಬೆಂಗಳೂರು, ಫೆಬ್ರವರಿ 20 (ಕರ್ನಾಟಕ ವಾರ್ತೆ)

2016 ರ ಜನವರಿ ಮಾಹೆಯಲ್ಲಿ ನಡೆದ ವಾಣಿಜ್ಯ ಪರೀಕ್ಷೆಯ ಫಲಿತಾಂಶವನ್ನು ಇಲಾಖಾ ವೆಬ್‌ಸೈಟ್ www.kseeb.kar.nic.in ನಲ್ಲಿ ದಿನಾಂಕ 20-02-2016 ರಂದು ಅಪರಾಹ್ನ 1.00 ಗಂಟೆಗೆ ಪ್ರಕಟಿಸಲಾಗುವುದು.

ವಾಣಿಜ್ಯ ಸಂಸ್ಥೆಗಳಲ್ಲಿ ದಿನಾಂಕ 22-02-2016 ರಂದು ಸಂಜೆ 4-00 ಗಂಟೆಗೆ ಫಲಿತಾಂಶವನ್ನು ಪ್ರಕಟಿಸಲು ಸಂಸ್ಥೆಯ ಮುಖ್ಯಸ್ಥರಿಗೆ ತಿಳಿಸಿದೆ.

ಬೆಂಗಳೂರು ನಗರ ಜಿಲ್ಲೆಯ ವಾಣಿಜ್ಯ ಸಂಸ್ಥೆಯ ಮುಖ್ಯಸ್ಥರು ದಿನಾಂಕ 22-02-2016 ರಂದು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು – 560 003 ಪೂರ್ವಾಹ್ನ 11.00 ಗಂಟೆಗೆ ಫಲಿತಾಂಶ ಪಟ್ಟಿಯನ್ನು ಖುದ್ದಾಗಿ ಪಡೆದುಕೊಳ್ಳಬಹುದು.

ಬಾಬು:ಜಿಪಿಆರ್

## ಜೇಷ್ಠತಾ ಪಟ್ಟಿ ಪ್ರಕಟ

ಬೆಂಗಳೂರು, ಫೆಬ್ರವರಿ 20 (ಕರ್ನಾಟಕ ವಾರ್ತೆ)

ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢಶಾಲೆ, ಸಂಯುಕ್ತ ಪದವಿ ಪೂರ್ವ ಕಾಲೇಜು, ಹಾಗೂ ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಗ್ರೇಡ್ – 1 ವೃತಿ ಶಿಕ್ಷಣ ಶಿಕ್ಷಕರ ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ: 01-01-2016 ರಲ್ಲಿದ್ದಂತೆ ದಿನಾಂಕ : 30-01-2016 ರಂದು ಪ್ರಕಟಿಸಲಾಗಿದೆ.

ಬಾದಿತ ಶಿಕ್ಷಕರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಅಥವಾ ಉಪ ನಿರ್ದೇಶಕರ ಕಚೇರಿ (ಆಡಳಿತ) ಅಥವಾಇಲಾಖೆಯ ವೆಬ್‌ಸೈಟ್ ನಲ್ಲಿರುವ ಅಧಿಸೂಚನೆಯನ್ನು ಪರಿಶೀಲಿಸಿ, ಶಿಕ್ಷಕರ

ಹೆಸರು ಮತ್ತು ವಿಳಾಸ, ಜನ್ಮ ದಿನಾಂಕ, ವಿದ್ಯಾರ್ಹತೆ, ಸೇವೆಗೆ ಸೇರಿದ ದಿನಾಂಕ, ಗ್ರೇಡ್– 1 ಹುದ್ದೆಗೆ ನೇಮಕಗೊಂಡ ದಿನಾಂಕ ಅಥವಾ ಗ್ರೇಡ್ – 1 ಹುದ್ದೆಗೆ ಬಡ್ತಿ ಹೊಂದಿರುವ ದಿನಾಂಕ, ಜಾತಿ, ಮುಂತಾದ ಅಂಶಗಳಲ್ಲಿ ವ್ಯತ್ಯಾಸಗಳು ಕಂಡು ಬಂದಲ್ಲಿ ತಿದ್ದುಪಡಿಗೆ ಹಾಗೂ ಹೆಸರು ಬಿಟ್ಟು ಹೋಗಿದ್ದಲ್ಲಿ ಹೆಸರು ಸೇರ್ಪಡೆಗೆ ಆಕ್ಷೇಪಣೆಗಳನ್ನು ಶಾಲಾ ಮುಖ್ಯಸ್ಥರ ಮೂಲಕ ಜಿಲ್ಲಾ ಉಪ ನಿರ್ದೇಶಕರ (ಆಡಳಿತ) ಕಚೇರಿಗೆ ದಿನಾಂಕ : 29–02–2016ರ ಒಳಗಾಗಿ ಆಕ್ಷೇಪಣೆಗಳನ್ನು ಅಧಿಸೂಚನೆಯಲ್ಲಿ ಸೂಚಿಸಿರುವಂತೆ ಸಲ್ಲಿಸಲು ತಿಳಿಸಿದೆ.

ಬಾಬು:ಜಿಪಿಆರ್

## ಫೆಬ್ರವರಿ 21 ಕ್ಕೆ ಎಂ. ಜಿ. ರಸ್ತೆಯಲ್ಲಿ ತೆರೆದ ಬೀದಿ ಕಾರ್ಯಕ್ರಮ

ಬೆಂಗಳೂರು, ಫೆಬ್ರವರಿ 20 (ಕರ್ನಾಟಕ ವಾರ್ತೆ)

ಮಹಾತ್ಮ ಗಾಂಧಿ ರಸ್ತೆಯಲ್ಲಿ ನಡೆಸಲು ಉದ್ದೇಶಿಸಿರುವ "ತೆರೆದ ಬೀದಿ" ಕಾರ್ಯಕ್ರಮವನ್ನು ಫೆಬ್ರವರಿ 21 ರಂದು ನಡೆಸಲಾಗುವುದು ಎಂದು ನಗರಾಭಿವೃದ್ಧಿ ಇಲಾಖೆಯ ನಗರ ಭೂಸಾರಿಗೆ ನಿರ್ದೇಶನಾಲಯದ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರಕುಶಲಕರ್ಮಿಗಳು ಹಾಗೂ ಸಾರ್ವಜನಿಕರ ಹೆಚ್ಚು ಪಾಲ್ಗೊಳ್ಳುವಿಕೆ ಬೇಡಿಕೆ ಹಿನ್ನೆಲೆಯಲ್ಲಿ ಬೆಂಗಳೂರು ಮಹಾತ್ಮಗಾಂಧಿ ರಸ್ತೆಯಲ್ಲಿನ ಅನಿಲ್ ಕುಂಬ್ಳೆ ವೃತ್ತದಿಂದ ಬ್ರಿಗೇಡ್ ರಸ್ತೆ ಜಂಕ್ಷನ್‌ವರೆಗೆ ಫೆಬ್ರವರಿ 21 ರಂದು ಬೆಳಿಗ್ಗೆ 9–00 ಗಂಟೆಯಿಂದ ರಾತ್ರಿ 9–00 ಗಂಟೆವರೆಗೆ "ತೆರೆದ ಬೀದಿ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಲಾಗಿದೆ.

ಸ್ಟಾಲ್‌ಗಳ ನೋಂದಣಿಗಾಗಿ ಬೆಳಿಗ್ಗೆ 11–00 ರಿಂದ ಸಂಜೆ 4–00 ಗಂಟೆ ಅವಧಿಯಲ್ಲಿ ಬೆಂಗಳೂರಿನ ಎಂ.ಜಿ. ರಸ್ತೆ ಮೆಟ್ರೋ ರಂಗೋಲಿಯಲ್ಲಿ ಹಾಗೂ ದೂರವಾಣಿ ಸಂಖ್ಯೆ 080–22969265, ಗ್ರಾಹಕ ಸಂಪರ್ಕ ಅಧಿಕಾರಿ ಬಿ. ವಿ. ಮಂಜುನಾಥ್ ಮೊಬೈಲ್ ಸಂಖ್ಯೆ 959110045, ಜೋಯಬ್ ಮೊ. ಸಂಖ್ಯೆ 9916261224 ಇವರನ್ನು ಸಂಪರ್ಕಿಸಲು ಕೋರಿದೆ.

ಬಾಬು:ಜಿಪಿಆರ್